18

# ಕರ್ನಾಟಕ ವಿಧಾನ ಪರಿಷತ್ತು

ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಪ್ರಕಾಶ್ ಬಾ ಹುಕ್ಕೇರಿ ರವರ ನಿಯಮ 72 ಕ್ಕೆ ಉತ್ತರಿಸುವ ಬಗ್ಗೆ.

**ಪ್ರಶ್ನೆ**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆ ಅಧೀನದಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ನಡೆಯುತ್ತಿರುವ ಮೊರಾರ್ಜಿ ದೇಸಾಯಿ/ ಕಿತ್ತೂರು ರಾಣಿ ಚೆನ್ನಮ್ಮ / ಡಾ: ಬಿ.ಆರ್ ಅಂಬೇಡ್ಕರ್ ಹಾಗೂ ಇತರ ಸರ್ಕಾರಿ ವಸತಿ ಶಾಲೆಗಳಲ್ಲಿ , ಪ್ರಾಢ ಶಾಲಾ ಶಿಕ್ಷಣ ವ್ಯಾಸಂಗ ಪೂರೈಸಿದ ಆರ್ಥಿಕವಾಗಿ ಹಿಂದುಳಿದ ವಿದ್ಯಾರ್ಥಿ/ ವಿದ್ಯಾರ್ಥಿನಿಯರು ಪದವಿ ಪೂರ್ವ ಶಿಕ್ಷಣ ವ್ಯಾಸಂಗಕ್ಕೆ ದೂರದೂರಿಗೆ ತೆರಳಬೇಕಾಗಿರುವುದರಿಂದ, ಅನೇಕ ವಿದ್ಯಾರ್ಥಿಗಳು ಅದರಲ್ಲೂ ವಿದ್ಯಾರ್ಥಿನಿಯರು ತಮ್ಮ ವ್ಯಾಸಂಗವನ್ನು ಮೊಟಕುಗೊಳಿಸಿ ಭವಿಷ್ಯವನ್ನು ಹಾಳು ಮಾಡಿಕೊಳ್ಳುತ್ತಿರುವುದರಿಂದ, ಸದರಿ ಸರ್ಕಾರಿ ವಸತಿ ಶಾಲೆಗಳನ್ನು ಪದವಿ ಪೂರ್ವ ಶಿಕ್ಷಣಕ್ಕೆ ಅವಕಾಶ ಕಲ್ಪಿಸಲು ಅನುವಾಗುವಂತೆ ಉನ್ನತೀಕರಿಸುವ ಕುರಿತು, ದಿನಾಂಕ: 11.07.2023 ವಿಧಾನ ಪರಿಷತ್ತಿನ ಕಾರ್ಯಕಲಾಪದಲ್ಲಿ ಮಾನ್ಯ ಸಮಾಜ ಕಲ್ಯಾಣ ಸಚಿವರ ಗಮನವನ್ನು ಸೆಳೆಯಲು ಅವಕಾಶ ಮಾಡಿಕೊಡುವಂತೆ ತಮ್ಮನ್ನು ಕೋರುತ್ತೇನೆ.

**ಉತ್ತರ**

ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ಬೆಳಗಾವಿ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಗಳು ಸೇರಿದಂತೆ ಒಟ್ಟು 742 ವಸತಿ ಶಾಲೆಗಳನ್ನು ಉನ್ನತೀಕರಿಸುವ ಪ್ರಸ್ತಾವನೆಯು ಪ್ರಸ್ತುತ ಪರಿಶೀಲನೆಯಲ್ಲಿದ್ದು, ಅನುದಾನ ಲಭ್ಯತೆಗೆ ಅನುಸಾರವಾಗಿ ಹಂತ ಹಂತವಾಗಿ ಮೇಲ್ದರ್ಜೆಗೇರಿಸಲು ಕ್ರಮವಹಿಸಲಾಗುವುದು.

**ಸಕಇ 112 ಎಂಡಿಎಸ್ 2023**

**(ಡಾ.ಹೆಚ್.ಸಿ. ಮಹದೇವಪ್ಪ)**
ಸಮಾಜ ಕಲ್ಯಾಣ ಸಚಿವರು